# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸುರೇಶ ನಿಂಗಪ್ಪ ಗೌಡರ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ.

**ಓದಲಾಗಿದೆ.** ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 26 ಇಏನ್‌ಕ್ಯೂ 2011, ದಿನಾಂಕ. 19-09-2011.

**ಪ್ರಸ್ತಾವನೆ:**

ಶ್ರೀ ಸುರೇಶ ನಿಂಗಪ್ಪ ಗೌಡರ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರು ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಹುನಗುಂದ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ, ಅವರ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಆಸ್ತಿಯನ್ನು ಹೊಂದಿದ್ದಾರೆಂದು ಮೇಲ್ನೋಟಕ್ಕೆ ಕಂಡು ಬಂದ ಕಾರಣ. ಅವರ ವಿರುದ್ಧ ಲೋಕಾಯುಕ್ತ ಕಚೇರಿಯಲ್ಲಿ ದಾಖಲಾಗಿರುವ ವಿಚಾರಣೆಯನ್ನು ಕಾಯ್ದಿರಿಸಿ, ಮೇಲೆ ಓದಲಾದ ದಿನಾಂಕ. 19-09-2012ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಿ, ಅವರ ಸೇವೆಯನ್ನು ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಲಾಗಿತ್ತು.

ಪ್ರಕರಣವನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಶ್ರೀ ಸುರೇಶ ನಿಂಗಪ್ಪ ಗೌಡರ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ವಿರುದ್ಧ ಲೋಕಾಯುಕ್ತ ಕಚೇರಿಯಲ್ಲಿ ದಾಖಲಾಗಿರುವ ವಿಚಾರಣೆಯನ್ನು ಕಾಯ್ದಿರಿಸಿ, ಅಮಾನತ್ತನ್ನು ತೆರವುಗೊಳಿಸಲು ನಿರ್ಧರಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ ಸಂಖ್ಯೆ. ಗ್ರಾಅಪ 26 ಇಏನ್‌ಕ್ಯೂ 2011, ಬೆಂಗಳೂರು,

## ದಿನಾಂಕ.06-11-2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 26 ಇಏನ್‌ಕ್ಯೂ 2011, ದಿನಾಂಕ. 19-09-2011ರಲ್ಲಿ ಶ್ರೀ ಸುರೇಶ ನಿಂಗಪ್ಪ ಗೌಡರ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ಸೇವೆಯನ್ನು ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಿರುವುದನ್ನು ಹಿಂಪಡೆಯಲಾಗಿದೆ.

ಈ ಅಧಿಕಾರಿಯ ವಿರುದ್ಧ ಲೋಕಾಯುಕ್ತ ಕಚೇರಿಯಲ್ಲಿ ದಾಖಲಾಗಿರುವ ವಿಚಾರಣೆಯನ್ನು ಕಾಯ್ದಿರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತನ್ನು ತೆರವುಗೊಳಿಸಿದೆ. ಈ ಅಧಿಕಾರಿಯ ಸೇವೆಯನ್ನು ಮುಂದಿನ ಸ್ಥಳನಿಯುಕ್ತಿಗಾಗಿ ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ).
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

----2

2. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್. ಸರ್ಕಲ್, ಬೆಂಗಳೂರು (ಉತ್ತರ), ಧಾರವಾಡ.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ
7. ಅಧೀಕ್ಷಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ವೃತ್ತ, ಬೆಳಗಾವಿ.
8. ಶ್ರೀ ಸುರೇಶ ನಿಂಗಪ್ಪ ಗೌಡರ, ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಫ್ಲಾಟ್ ನಂ. 301, ಬೇಂದ್ರೆನಗರ, ಸಂಪಗೆನಗರ, ಬಸ್‌ಸ್ಟ್ಯಾಂಡ್ ಹಿಂಭಾಗ, ಧಾರವಾಡ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ / ಸೇವೆಗಳು-ಸಿ).
10. ಮಾನ್ಯ ಉಪ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ರಕ್ಷಾ ಕಡತ / ಮೇಲ್ವಿಚಾರಕರು, ಗಣಕಯಂತ್ರ ಕೋಶ ವಿಭಾಗ, / ಹೆಚ್ಚುವರಿ ಪ್ರತಿಗಳು.